# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103

ಸಂಖ್ಯೆ:ತು.ವಿ:ಖ.ಕೋ:102:2024-25/1655 ದಿನಾಂಕ:26.07.2024

## ದರಪಟ್ಟಿ ಆಹ್ವಾನ

ವಿಷಯ: ವಿಶ್ವವಿದ್ಯಾನಿಲಯದ ಆಡಳಿತ ವಿಭಾಗಗಳಲ್ಲಿ ಸ್ನಾತಕೋತ್ತರ ವಿಭಾಗಗಳಲ್ಲಿ ಹಾಗೂ ವಿ.ವಿ. ವಿದ್ಯಾರ್ಥಿನಿಲಯಗಳಲ್ಲಿ **Face Reading Biometric Machine** ಗಳನ್ನು ಸರಬರಾಜು ಪಡೆಯಲು ದರಪಟ್ಟಿಯನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ:
1. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/9035 ದಿನಾಂಕ: 09.09.2022.
2. ಪ್ರಥಮ ಖರೀದಿ ಸಮಿತಿ ಸಭೆಯ ನಿರ್ಣಯ: 05.06.2024
3. ಐದನೇ ಸಾಮಾನ್ಯ ಸಿಂಡಿಕೇಟ್ ಸಭೆಯ ನಿರ್ಣಯ: 07.06.2024
4. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 25.07.2024

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯದ ಆಡಳಿತ ವಿಭಾಗಗಳಲ್ಲಿ ಸ್ನಾತಕೋತ್ತರ ವಿಭಾಗಗಳಲ್ಲಿ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ **Face Reading Biometric Machine** ಗಳನ್ನು ಸರಬರಾಜು ಪಡೆಯಲು ಈ ಕೆಳಕಂಡ ಸಂರಚನೆ ಮತ್ತು ಷರತ್ತುಗಳಿಗೊಳಪಟ್ಟು ನೋಂದಾಯಿತ ಆಸಕ್ತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಬಯೋಮೆಟ್ರಿಕ್ ಯಂತ್ರಗಳ ಮಾದರಿ & ವೈಶಿಷ್ಟತೆ ವಿವರಗಳು ಈ ಕೆಳಕಂಡಂತಿವೆ.

| Sl. No. | **Specifications** (Fingerprint reader with Face Recognition) | Required Quantity (Approx.) | Rate to be quoted per Chair (Incl. of all taxes) |
|---|---|---|---|
| 01 | CPU : 32bit CPU<br>Camera : High Resolution Infrared Camera<br>Fingerprint sensor : 600 DPI Optical Sensor<br>LCD : TFT LCD<br>LED : 1(Red-Green dual color)<br>Keyboard : 16 keys<br>Communication interface : Standard with TCP/IP (10/100Mbps)<br>Face capacity : 1000<br>Fingerprint capacity : 5000<br>User Log/Management Log : 3,00,000/3,000<br>Identify mode : Face/Fingerprint/password<br>FAR/FRR (Fingerprint) : 0.00001/0.1(%)<br>Matching speed : <1.0 second (enrolled 50000 finger)<br>Allowable finger rotation : 360°(all direction)<br>Inclusive of : USB disk, ID Card Support, Finger touch sensor, Voice output, RTC, Door open function, USB dist up/download | 10 | |

**ಷರತ್ತುಗಳು:**

1. ಮುಚ್ಚಿದ ಲಕೋಟೆಯ ಮೇಲೆ "ವಿಶ್ವವಿದ್ಯಾನಿಲಯದ ಆಡಳಿತ ವಿಭಾಗಗಳಲ್ಲಿ ಸ್ನಾತಕೋತ್ತರ ವಿಭಾಗಗಳಲ್ಲಿ ಹಾಗೂ ವಿ.ವಿ. ವಿದ್ಯಾರ್ಥಿನಿಲಯಗಳಲ್ಲಿ Face Reading Biometric Machine ಗಳನ್ನು ಅಳವಡಿಸಲು ದರಪಟ್ಟಿ" ಎಂದು ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103, ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: **06.08.2024** ಅಪರಾಹ್ನ **3.00** ಗಂಟೆ.

(ಮ.ತಿ.ನೋ)

4. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
5. ಸದರಿ ದರಪಟ್ಟಿಯು ಒಂದು ಲಕ್ಷ ಮೀರಿದ ಸಾಮಗ್ರಿಗಳು/ಸೇವೆಗಳಿಗೆ ಸಂಬಂಧಿಸಿರುವುದರಿಂದ ಸದರಿ ಸೇವೆಗೆ ಕೆ.ಟಿ.ಪಿ.ಪಿ ನಿಯಮಾನುಸಾರ ರೂ. 2,500/- ಗಳ ಇ.ಎಂ.ಡಿ Demand Draft in favour of "Finance Officer, Tumkur University" payable at Tumakuru ಇವರಿಗೆ ದರಪಟ್ಟಿಯೊಂದಿಗೆ ಸಲ್ಲಿಸತಕ್ಕದ್ದು.
6. ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
7. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸಾಗಾಣಿಕೆ ವೆಚ್ಚಗಳನ್ನು ಒಳಗೊಂಡಿರತಕ್ಕದ್ದು.
8. ದರಪಟ್ಟಿಯಲ್ಲಿ ನಮೂದಿಸಿರುವ ಉಪಕರಣದ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
9. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
11. ತಮ್ಮ ಸಂಸ್ಥೆಯಿಂದ ಅಳವಡಿಸಲು ಉದ್ದೇಶಿಸಿರುವ ಬಯೋಮೆಟ್ರಿಕ್ ಯಂತ್ರದ ಸಂರಚನೆಯಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಯ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
12. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
13. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ **ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು** ಸಂಪರ್ಕಿಸಬಹುದು.

ಆದೇಶದ ಮೇರೆಗೆ,

ಉಪಕುಲಸಚಿವರು
**ಉಪಕುಲಸಚಿವರು**
**ಖರೀದಿ ಕೋಶ**
**ತುಮಕೂರು ವಿಶ್ವವಿದ್ಯಾನಿಲಯ**
**ತುಮಕೂರು**

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
2. ಕಚೇರಿ ಪ್ರತಿ.